ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಕನಿಷ್ಟ 25 ವಿದ್ಯಾರ್ಥಿಗಳು ವಿಜ್ಞಾನ ವಿಷಯಗಳನ್ನು ಅಪೇಕ್ಷಿಸಿ ಮುಂದೆ ಬಂದಲ್ಲಿ ವಿಜ್ಞಾನ ವಿಭಾಗವನ್ನು ಮಂಜೂರು ಮಾಡಲಾಗುವುದು.

ರಾಜ್ಯದಲ್ಲಿರುವ ಖಾಸಗಿ ಶಾಲೆಗಳು

1543 (1770) ಶ್ರೀ ಬಿ.ಆರ್. ನೀಲಕಂಠಪ್ಪ (ತರೀಕೆರೆ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಅನುದಾನ ರಹಿತ ಪ್ರೌಢ ಮತ್ತು ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು;

ಆ) ಈ ಶಾಲೆಗಳಿಗೆ ಅನುದಾನ ನೀಡುವ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಖಾಸಗಿ ಪ್ರೌಢ ಶಾಲೆಗಳು - 3393, ಪ್ರಾಥಮಿಕ ಶಾಲೆಗಳು - 4212

ಆ) ದಿನಾಂಕ : 01-06-87ರ ನಂತರ ಪ್ರಾರಂಭಿಸಿದ ಶಾಲೆಗಳು ಶಾಶ್ವತ ಅನುದಾನರಹಿತ ಶಾಲೆಗಳಾಗಿರುತ್ತವೆ. ಸರ್ಕಾರದ ಪ್ರಸ್ತುತ ನೀತಿಯನುಸಾರ ಅನುದಾನ ನೀಡಲು ಅವಕಾಶವಿರುವುದಿಲ್ಲ ಈ ವರ್ಗದ ಶಾಲೆಗಳು ಅನುದಾನ ಪಡೆಯಲು ಅರ್ಹವಾಗಿರುವುದಿಲ್ಲ.

ವೃತ್ತಿ ಶಿಕ್ಷಕರ ಕುರಿತು

1544 (1771) ಶ್ರೀ ಬಿ.ಆರ್. ನೀಲಕಂಠಪ್ಪ (ತರೀಕೆರೆ) : ಮಾನ್ಯ ಪ್ರಾಥಮಿಕ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸರ್ಕಾರಿ ಮತ್ತು ಖಾಸಗಿ ಪದವಿಪೂರ್ವ ಕಾಲೇಜುಗಳಲ್ಲಿ ವಿವಿಧ ಕೋರ್ಸ್‌ಗಳಲ್ಲಿ ಅರೆಕಾಲಿಕ ವೃತ್ತಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕ ಮತ್ತು ಶಿಕ್ಷಕಿಯರ ಸಂಖ್ಯೆ ಎಷ್ಟು?

ಆ) ಸದರಿ ಶಿಕ್ಷಕರನ್ನು ಖಾಯಂ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಇ) ಹಾಗಿದ್ದಲ್ಲಿ ಖಾಯಂ ಮಾಡಲು ಯಾವ ಮಾನದಂಡ ಅನುಸರಿಸಲಾಗುವುದು ಮತ್ತು ಎಂದಿನಿಂದ ಖಾಯಂ ಮಾಡಲಾಗುವುದು.

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಸರ್ಕಾರಿ ಕಾಲೇಜಿನಲ್ಲಿ - 5211, ಖಾಸಗಿ ಕಾಲೇಜಿನಲ್ಲಿ - 324 ಒಟ್ಟು - 5535

ಆ) ಇಲ್ಲ

ಇ) 'ಆ' ಗೆ ನೀಡಿರುವ ಉತ್ತರದಿಂದ ಉದ್ಭವಿಸುವುದಿಲ್ಲ

ಮುದ್ದೇಬಿಹಾಳ ತಾಲ್ಲೂಕು ನಲವತವಾಡ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಪರಿವರ್ತಿಸುವುದು